## ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 211 (258) |
| ಸದಸ್ಯರ ಹೆಸರು : | ಶ್ರೀ ಕೆ. ಪ್ರತಾಪ ಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ : | 14-09-2021 |
| ಉತ್ತರಿಸುವವರು : | ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ ಸಚಿವರು. |

*****

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕುಂದಾಪುರ ತಾಲ್ಲೂಕಿನ ಗ್ರಾಮೀಣ ಭಾಗದ ಜನರು ತಮ್ಮ ವೈದ್ಯಕೀಯ ಶಿಕ್ಷಣ, ವ್ಯಾಪಾರ, ಬ್ಯಾಕಿಂಗ್ ಮತ್ತಿತ್ತರ ಕಾರಣಗಳಿಂದ ಕುಂದಾಪುರ ಪೇಟೆಯನ್ನು ಆಶ್ರಯಿಸಿರುವುದರಿಂದ ಪುರಸಭಾ ವ್ಯಾಪ್ತಿಯಲ್ಲಿ ಪಾರ್ಕಿಂಗ್ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕುಂದಾಪುರದ ಹೃದಯ ಭಾಗದಲ್ಲಿ ಬಹುಮಹಡಿ ಪಾರ್ಕಿಂಗ್ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ ಸರ್ಕಾರವು ಚಿಂತನೆಯನ್ನು ಹೊಂದಿದೆಯೇ; | ಹೌದು.<br>ಕುಂದಾಪುರ ಪುರಸಭಾ ವ್ಯಾಪ್ತಿಯಲ್ಲಿ ವಾಹನ ದಟ್ಟಣೆಯಿಂದಾಗಿ ಪಾರ್ಕಿಂಗ್ ತೊಂದರೆಯಾಗುತ್ತಿರುವುದನ್ನು ಪುರಸಭೆಯು ಗಮನಿಸಿ ಪೊಲೀಸ್ ಇಲಾಖೆಯು(ಟ್ರಾಫಿಕ್) ಸಹಕಾರದೊಂದಿಗೆ ನಗರದ ಆಯ್ದ ಭಾಗಗಳಲ್ಲಿ ವಾಹನ ನಿಲುಗಡೆ ಸ್ಥಳ ಗುರುತಿಸುವುದು. ಸುಗಮ ಸಂಚಾರಕ್ಕೆ ಏಕಮುಖಿ ರಸ್ತೆಗೆ ಕ್ರಮ ಕೈಗೊಳ್ಳುವುದು ಮುಂತಾದ , ಕಾರ್ಯಗಳನ್ನು ಹಮ್ಮಿಕೊಂಡಿದೆ ಹಾಗೂ ಕುಂದಾಪುರದ ಹೃದಯ ಭಾಗದಲ್ಲಿ ಬಹುಮಹಡಿ ಪಾರ್ಕಿಂಗ್ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ ಯಾವುದೇ ಚಿಂತನೆಯನ್ನು ಹೊಂದಿರುವುದಿಲ್ಲ. |
| (ಆ) | ಕುಂದಾಪುರ ಪೇಟೆ ಭಾಗದಲ್ಲಿ ವಾಹನ ದಟ್ಟಣೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಕುಂದಾಪುರದ ಹೊರ ವೃತ್ತದಲ್ಲಿ ರಿಂಗ್‌ರೋಡ್ ನಿರ್ಮಾಣದ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ; ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು? | ಅಂತಹ ಯಾವುದೇ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ. |

ಸಂಖ್ಯೆ: ನಅಇ 162-ಜಿಇಎಲ್ 2021(ಇ)

(ಸಹಿ)

ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ ಸಚಿವರು